# ಕನ್ನಡ ಪೋಸ್ಟ್

KANNADA POST

ಸಂಪಾದಕ : ಮಂಜು ಬನವಾಸೆ

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 242 | Pages. 2 | Date: 06-09-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 242 - ಪುಟಗಳು : 2 | 06-09-2026 | ಭಾನುವಾರ | Ph: 8762954248 | ದರ : ₹1


# ಅರ್ಜಿ ವಿಲೇವಾರಿಗೆ 15 ದಿನಗಳ ಗಡುವು

## ಸಚಿವ ಶಿವಲಿಂಗೇಗೌಡ ಸೂಚನೆ | ಹಾಸನದಲ್ಲಿ ಪ್ರಜಾ ಸೇವಾ ಆಂದೋಲನಕ್ಕೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೈತರ, ನಾಗರಿಕರ ಹಾಗೂ ಶ್ರಮಿಕ ವರ್ಗದವರ ಸಂಕಷ್ಟಗಳನ್ನು ನಿವಾರಿಸುವ ನಿಟ್ಟಿನಲ್ಲಿ ದೂರುಗಳನ್ನು ಆಲಿಸಿ ಪರಿಹಾರ ಕಲ್ಪಿಸಲು ಸರ್ಕಾರ ಪ್ರಜಾ ಸೇವಾ ಇಲಾಖೆಯನ್ನು ಜಾರಿಗೆ ತಂದಿದ್ದು 15 ದಿನಗಳಲ್ಲಿ ಸಮಸ್ಯೆಗೆ ಪರಿಹಾರ ದೊರಕಿಸಿಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಶನಿವಾರ ಆಯೋಜಿಸಿದ್ದ ಪ್ರಜಾ ಸೇವಾ ಆಂದೋಲನ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯುತ್ ಬಿಲ್ ಪಾವತಿ ಆಗದ ಕಾರಣ ಕ್ಯಾತನಹಳ್ಳಿ ಏತ ನೀರಾವರಿಯಿಂದ ನೀರು ಹರಿಸುತ್ತಿಲ್ಲ ಎಂದು ಸಾರ್ವಜನಿಕರು ಸಚಿವರ ಗಮನಕ್ಕೆ ತಂದ ಹಿನ್ನೆಲೆಯಲ್ಲಿ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಬಾಕಿ ಹಣ ಪಾವತಿ ಮಾಡಲಾಗುವುದು. ನೀರು ಹರಿಸಿ ಎಂದು ಸೂಚಿಸಿದರು.

ವೃದ್ಧಾಪ್ಯ ವೇತನ, ವಿಧವಾ ವೇತನ, ವಿಕಲಚೇತನರ ವೇತನ, ಗೃಹ ಲಕ್ಷ್ಮಿ, ನಿವೇಶನ, ಮನೆ, ಕೆರೆ ಅಭಿವೃದ್ಧಿ, ಹಕ್ಕು ಪತ್ರ, ದುರಸ್ತಿ, ಖಾತೆ, ಸ್ಮಶಾನ ಅಭಿವೃದ್ಧಿ, ರಸ್ತೆ, ಒತ್ತುವರಿ ತೆರವು, ಅನಧಿಕೃತವಾಗಿ ಶೆಡ್ ನಿರ್ಮಾಣ ತೆರವು, ಕುಡಿಯುವ ನೀರು ಸೌಲಭ್ಯಗಳು ಅರ್ಹರಿಗೆ ದೊರೆಯಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಬಹಳ ವರ್ಷಗಳಿಂದ ದುರಸ್ತಿಗಾಗಿ ಜನರು ಅಲೆಯುತ್ತಿರುವುದನ್ನು ತಪ್ಪಿಸಲು ವಿ.ಎ. ಆರ್.ಐ. ತಹಶೀಲ್ದಾರ್, ಉಪವಿಭಾಗಾಧಿಕಾರಿ, ಎ.ಡಿ.ಎಲ್.ಆರ್, ಡಿ.ಡಿ.ಎಲ್.ಆರ್ ಕುಳಿತು ದುರಸ್ತಿ ಆಗದಿರಲು ಕಾರಣ ಏನು ಎಂಬುದನ್ನು ಅರಿತು ಒಬ್ಬರಿಗೊಬ್ಬರು ಸ್ಪಂದಿಸಿ ಸಂಪೂರ್ಣ ಮಾಹಿತಿ ತಿಳಿದುಕೊಂಡು ಮಾನವೀಯತೆಯಿಂದ ದುರಸ್ತಿಗೆ ಸಂಬಂಧಿಸಿದಂತ ಎಲ್ಲಾ ಅರ್ಜಿಗಳನ್ನು ಮೂರು ತಿಂಗಳಲ್ಲಿ ಕಾರ್ಯಗತಗೊಳಿಸಲು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ 94 ಸಿ ಯಲ್ಲಿ ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಯಿತು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಸಿಮೆಂಟ್ ಮಂಜು, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ರಂಜಿತ್ ಗೊರೂರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಶುಭನ್ವಿತಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್, ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿಧಿ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರರು ಉಪಸ್ಥಿತರಿದ್ದರು.



### ಮಹಾನಗರ ಪಾಲಿಕೆಗೆ 185 ಕೋಟಿ ರೂ.

ಮಹಾನಗರ ಪಾಲಿಕೆಗೆ ಸುತ್ತಮುತ್ತಲಿನ ಹಳ್ಳಿಗಳು ಸೇರ್ಪಡೆ ಆಗಿರುವುದರಿಂದ ಸರ್ಕಾರದಿಂದ 185 ಕೋಟಿ ರೂ. ಮಂಜೂರು ಮಾಡಿಸಲಾಗಿದೆ. ಮೂಲಭೂತ ಸೌಕರ್ಯ ಕಲ್ಪಿಸಲು ಕ್ರಿಯಾ ಯೋಜನೆ ತಯಾರಿಸುವಾಗ ಈಗ ಬಂದಿರುವ ಅರ್ಜಿಗಳನ್ನು ಪರಿಗಣಿಸಿ ಸೇರಿಸುವಂತೆ ನಿರ್ದೇಶನ ನೀಡಿದರು.

ಬಡವರಿಗೆ ಪಡಿತರ ಪದಾರ್ಥಗಳು ಸರಿಯಾದ ಪ್ರಮಾಣದಲ್ಲಿ ತಲುಪಬೇಕು. ಸಾರ್ವಜನಿಕವಾಗಿ ದೂರುಗಳು ಕೇಳಿ ಬರುತ್ತಿವೆ. ಗೋಡಾನ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಅನ್ಯಾಯ ನಡೆಯದಂತೆ ಜವಾಬ್ದಾರಿ ತೆಗೆದುಕೊಳ್ಳುವಂತೆ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

# ಮಕ್ಕಳ ಭವಿಷ್ಯ ರೂಪಿಸುವ ಗುರುಗಳ ಸೇವೆ ಅನನ್ಯ: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಒಬ್ಬ ವ್ಯಕ್ತಿ ಜೀವನದಲ್ಲಿ ಎಷ್ಟೇ ದೊಡ್ಡ ಸ್ಥಾನಕ್ಕೆ ಬೆಳೆದರೂ, ಆ ಸಾಧನೆಯ ಹಿಂದೆ ಆತನಿಗೆ ವಿದ್ಯೆ, ಸಂಸ್ಕಾರ ಹಾಗೂ ಮಾರ್ಗದರ್ಶನ ನೀಡಿದ ಶಿಕ್ಷಕರ ಕೊಡುಗೆ ಇದ್ದೇ ಇರುತ್ತದೆ. ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕರ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ನಗರದ ಶ್ರೀನಿವಾಸ ಕನ್ವೆನ್ಷನ್ ಹಾಲ್‌ನಲ್ಲಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಪೂಜ್ಯನೀಯ ಸ್ಥಾನ ನೀಡಲಾಗಿದೆ. ಗುರುಗಳನ್ನು ದೇವರ ಸಮಾನವಾಗಿ ಕಾಣುವ ಪರಂಪರೆ ನಮ್ಮದು. ಜಗತ್ತಿನ ಬೇರೆ ದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಶಿಕ್ಷಕರಿಗೆ ನೀಡುವ ಗೌರವ ವಿಶಿಷ್ಟವಾದದ್ದು. ವ್ಯಕ್ತಿಯ ವ್ಯಕ್ತಿತ್ವ ನಿರ್ಮಾಣದಿಂದ ಹಿಡಿದು ದೇಶದ ಭವಿಷ್ಯ ರೂಪಿಸುವವರೆಗೂ ಶಿಕ್ಷಕರ ಪಾತ್ರ ಬಹುದೊಡ್ಡದು ಎಂದರು.

ಶಾಲೆಗೆ ಬರುವ ಪ್ರತಿ ವಿದ್ಯಾರ್ಥಿಯನ್ನೂ ತಮ್ಮ ಸ್ವಂತ ಮಕ್ಕಳಂತೆ ಕಾಣುವ ಮನೋಭಾವ ಶಿಕ್ಷಕರಲ್ಲಿದೆ. ಮಕ್ಕಳಿಗೆ ಕೇವಲ ಪಠ್ಯಪುಸ್ತಕದ ಶಿಕ್ಷಣ ನೀಡಿದರೆ ಸಾಲದು. ಉತ್ತಮ ಸಂಸ್ಕಾರ, ಸಂಸ್ಕೃತಿ, ಶಿಸ್ತು ಮತ್ತು ಮಾನವೀಯ ಮೌಲ್ಯಗಳನ್ನು ಕಲಿಸುವ ಮೂಲಕ ಅವರನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು. ಈ ಮಹತ್ತರ ಜವಾಬ್ದಾರಿಯನ್ನು ಶಿಕ್ಷಕರು ಸಮರ್ಥವಾಗಿ ನಿರ್ವಹಿಸುತ್ತಿದ್ದಾರೆ ಎಂದು ಸಿಮೆಂಟ್ ಮಂಜು ಮೆಚ್ಚುಗೆ ವ್ಯಕ್ತಪಡಿಸಿದರು.



ತಂದೆ-ತಾಯಿ ಮಕ್ಕಳಿಗೆ ಜೀವನದ ಮೊದಲ ಪಾಠ ಕಲಿಸಿದರೆ, ಶಿಕ್ಷಕರು ಅವರ ವ್ಯಕ್ತಿತ್ವಕ್ಕೆ ಸ್ಪಷ್ಟ ರೂಪ ನೀಡುತ್ತಾರೆ. ವಿದ್ಯಾರ್ಥಿ ಭವಿಷ್ಯದಲ್ಲಿ ಯಾವ ದಾರಿಯಲ್ಲಿ ಸಾಗಬೇಕು, ಸಮಾಜಕ್ಕೆ ಹೇಗೆ ಕೊಡುಗೆ ನೀಡಬೇಕು ಎಂಬುದಕ್ಕೆ ಸರಿಯಾದ ಮಾರ್ಗದರ್ಶನ ನೀಡುವವರು ಶಿಕ್ಷಕರು. ಹೀಗಾಗಿ ಶಿಕ್ಷಕ ವೃತ್ತಿ ಕೇವಲ ಉದ್ಯೋಗವಲ್ಲ, ಅದು ಭವಿಷ್ಯದ ಪೀಳಿಗೆಯನ್ನು ನಿರ್ಮಿಸುವ ಪವಿತ್ರ ಜವಾಬ್ದಾರಿ ಎಂದು ಬಣ್ಣಿಸಿದರು. ಸಕಲೇಶಪುರ ವಿಧಾನಸಭಾ ಕ್ಷೇತ್ರದ ಶೈಕ್ಷಣಿಕ ಸಾಧನೆಯಲ್ಲಿ ಶಿಕ್ಷಕರ ಕೊಡುಗೆ ಅಪಾರವಾಗಿದೆ. ಸಕಲೇಶಪುರ ಹಾಗೂ ಆಲೂರು ಭಾಗದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶದಲ್ಲಿ ನಿರಂತರವಾಗಿ ಉತ್ತಮ ಸಾಧನೆ ಮೂಡಿಬರುತ್ತಿರುವುದರ ಹಿಂದೆ ಶಿಕ್ಷಕರ ಪರಿಶ್ರಮವಿದೆ. ವಿದ್ಯಾರ್ಥಿಗಳ ಮೇಲೆ ಶಿಕ್ಷಕರು ತೋರುತ್ತಿರುವ ಕಾಳಜಿ, ನಿರಂತರ ಬೋಧನೆ ಹಾಗೂ ಮಾರ್ಗದರ್ಶನದಿಂದಲೇ ಇಂತಹ ಸಾಧನೆ ಸಾಧ್ಯವಾಗಿದೆ ಎಂದು ಶಾಸಕರು ಶ್ಲಾಘಿಸಿದರು.

ಮಾಜಿ ಶಾಸಕರಾದ ಎಚ್.ಎಂ. ವಿಶ್ವನಾಥ್, ಎಚ್. ಕೆ. ಕುಮಾರಸ್ವಾಮಿ, ಕಾಂಗ್ರೆಸ್ ಮುಖಂಡ ಮುರುಳಿ ಮೋಹನ್, ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಾ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಶಾರದಾ ಗುರುಮೂರ್ತಿ, ಲೋಹಿತ್ ಕೌಡಳ್ಳಿ ಮತ್ತಿತರರಿದ್ದರು.

# ವ್ಯಕ್ತಿಯ ಸರ್ವಾಂಗೀಣ ಬೆಳವಣಿಗೆಗೆ ಶಿಕ್ಷಣ ಪೂರಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಗುರು-ಶಿಷ್ಯ ಪರಂಪರೆಯು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅತ್ಯಮೂಲ್ಯ ಮತ್ತು ಅನನ್ಯವಾಗಿದೆ. ಪ್ರಾಚೀನ ಕಾಲದಿಂದಲೂ ಈ ಪರಂಪರೆಯು ಕೇವಲ ಅಕ್ಷರ ಜ್ಞಾನವನ್ನು ಮಾತ್ರ ನೀಡದೆ, ಒಬ್ಬ ವ್ಯಕ್ತಿಯ ಸರ್ವಾಂಗೀಣ ವಿಕಸನಕ್ಕೆ ಬುನಾದಿ ಹಾಕಿಕೊಟ್ಟಿದೆ ಎಂದು ಬಾಣಾವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ದೊರೇಶ್ ಬಿಳಿಕೆರೆ ಹೇಳಿದರು.

ಪಟ್ಟಣದ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ತಾಲೂಕು ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಡಾ.ಎಸ್. ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ-2026 ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಉಪನ್ಯಾಸ ನೀಡಿದ ಅವರು, ಪ್ರತಿಯೊಬ್ಬ ಮನುಷ್ಯನ ಬದುಕಿನ ಶ್ರೇಯಸ್ಸಿಗೆ ಗುರುವಿನ ಮಾರ್ಗದರ್ಶನ ಅತ್ಯಗತ್ಯ. ಅವರ ತ್ಯಾಗ, ಔದಾರ್ಯ, ವಾತ್ಸಲ್ಯ ಮತ್ತು ಪರಿಪಕ್ವತೆಯ ಬೋಧನೆ ಸಾಮಾನ್ಯನನ್ನೂ ಅಸಮಾನ್ಯನನ್ನಾಗಿ ಮಾಡಬಲ್ಲದು. ಇಂದಿನ ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲೂ ತಂತ್ರಜ್ಞಾನ ಎಷ್ಟೇ ಬೆಳೆದಿದ್ದರೂ ಗುರು ಮತ್ತು ವಿದ್ಯಾರ್ಥಿಯ ನಡುವಿನ ಭಾವನಾತ್ಮಕ ಸಂಬಂಧ ಹಾಗೂ ಮೌಲ್ಯಧಾರಿತ ಶಿಕ್ಷಣದ ಅಗತ್ಯತೆಯನ್ನು ನಾವು ಗುರು-ಶಿಷ್ಯ ಪರಂಪರೆಯಿಂದಲೇ ಕಲಿಯಬೇಕಾಗಿದೆ ಎಂದರು.



ಹಿಂದೆ ಶಿಕ್ಷಣದಲ್ಲಿ ಮಾನವೀಯ ಮೌಲ್ಯಗಳ ಶಿಕ್ಷಣದ ಅವಶ್ಯಕತೆ ಇರಲಿಲ್ಲ. ಏಕೆಂದರೆ ಅಂದಿನ ಶಿಕ್ಷಣ ಹಾಗೂ ಶಿಕ್ಷಕರು ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಕೇವಲ ಅಂಕ ಗಳಿಸುವುದಷ್ಟೇ ಶಿಕ್ಷಣದ ಗುರಿಯಾಗಿರಲಿಲ್ಲ. ನೈತಿಕತೆ, ಶಿಸ್ತು, ಮತ್ತು ಸತ್ಯದ ಹಾದಿಯಲ್ಲಿ ನಡೆಯುವುದನ್ನು ಕಲಿಸಿ ಉತ್ತಮ ನಾಗರಿಕರನ್ನು ರೂಪಿಸಲಾಗುತ್ತಿತ್ತು. ಇಂದು ಶಿಕ್ಷಣದಲ್ಲಿ ಮಾನವೀಯ ಮೌಲ್ಯಗಳನ್ನು ಬೋಧಿಸುವುದು ಅನಿವಾರ್ಯ ಪರಿಸ್ಥಿತಿ ಬಂದೊದಗಿದೆ. ಪ್ರಸ್ತುತ ಶಿಕ್ಷಣ ವ್ಯವಸ್ಥೆಯು ಹೆಚ್ಚಾಗಿ ಕೌಶಲ್ಯ ಆಧಾರಿತವಾಗಿದೆ. ಮೌಲ್ಯ ಶಿಕ್ಷಣ ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿ ಕಾಣೆಯಾಗಿದೆ. ಗುಣಾತ್ಮಕ ಶಿಕ್ಷಣದ ಜೊತೆಗೆ ಹೃದಯವಂತಿಕೆ ಕಲಿಸುವ ನೈತಿಕ ಶಿಕ್ಷಣ ಇಂದಿನ ಅಗತ್ಯವಾಗಿದೆ. ಶಿಕ್ಷಣ ಮನುಷ್ಯನ ಬುದ್ಧಿವಂತಿಕೆ ಹೆಚ್ಚಿಸುತ್ತದೆ. ಕೇವಲ ಬುದ್ಧಿವಂತಿಕೆ ಇದ್ದರೆ ಸಾಲದು. ಹೃದಯವಂತಿಕೆ ವ್ಯಕ್ತಿತ್ವದ ಭಾಗ ಆಗಬೇಕಾದರೆ ನೈತಿಕ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ, ಮಕ್ಕಳ ಬೌದ್ಧಿಕ, ಸಾಮಾಜಿಕ ಮತ್ತು ಮಾನಸಿಕ ಬೆಳವಣಿಗೆಗೆ ಪ್ರಾಥಮಿಕ ಶಿಕ್ಷಣವೇ ಅಡಿಪಾಯ. ಸಮಾಜದ ಪ್ರಗತಿಯು ಅದರ ಬುನಾದಿಯಾದ ಪ್ರಾಥಮಿಕ ಶಿಕ್ಷಣದ ಗುಣಮಟ್ಟವನ್ನು ಅವಲಂಬಿಸಿರುತ್ತದೆ. ಈ ಹಂತದಲ್ಲಿ ಸಿಗುವ ಗುಣಮಟ್ಟದ ಕಲಿಕೆ ಅವರ ಮುಂದಿನ ಉನ್ನತ ಶಿಕ್ಷಣವನ್ನು ಸುಲಭಗೊಳಿಸುತ್ತದೆ. ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಮತ್ತು ಅದರಿಂದಾಗಿ ವಿಷಯವಾರು ಶಿಕ್ಷಕರು ಎದುರಿಸುತ್ತಿರುವ ಮಾನಸಿಕ ಹಾಗೂ ಕೆಲಸದ ಒತ್ತಡ ಇಂದು ಶಿಕ್ಷಣ ಕ್ಷೇತ್ರದಲ್ಲಿ ಅತ್ಯಂತ ಗಂಭೀರವಾದ ಸಮಸ್ಯೆಯಾಗಿದೆ. ಒಬ್ಬ ಶಿಕ್ಷಕರು ತಮಗೆ ಪರಿಣತಿಯಿಲ್ಲದ ವಿಷಯಗಳನ್ನೂ ಬೋಧಿಸಬೇಕಾಗಿ ಬಂದಾಗ ಶಿಕ್ಷಣದ ಗುಣಮಟ್ಟ ಮತ್ತು ಶಿಕ್ಷಕರ ಆರೋಗ್ಯ ಎರಡರ ಮೇಲೂ ಇದು ಕೆಟ್ಟ ಪರಿಣಾಮ ಬೀರುತ್ತದೆ. ಸರ್ಕಾರವು ಪ್ರಾಥಮಿಕ ಶಾಲೆಗಳಲ್ಲಿ ಅಗತ್ಯವಿರುವ ಶಿಕ್ಷಕರ ನೇಮಕಾತಿಗೆ ಶೀಘ್ರದಲ್ಲೇ ಸೂಕ್ತ ಕ್ರಮ ಕೈಗೊಳ್ಳಬೇಕಾಗಿದೆ ಎಂದರು.

ಕರ್ನಾಟಕ ಪಬ್ಲಿಕ್ ಶಾಲೆಗಳ ಅಭಿವೃದ್ಧಿ ಶಾಲೆಗಳನ್ನು ಉನ್ನತೀಕರಿಸಲು ಅನುದಾನದ ಕೊರತೆ ಎದುರಾಗುತ್ತಿದೆ. ಕೆಪಿಎಸ್ ಶಾಲೆಗಳನ್ನು ಮಾದರಿ ಶಾಲೆಗಳನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕೂಡಲೇ ಅನುದಾನ ಬಿಡುಗಡೆ ಮಾಡಬೇಕು. ಶಿಕ್ಷಣ ಇಲಾಖೆಯ ಯೋಜನೆಗಳಿಗೆ ಹಣಕಾಸು ಇಲಾಖೆಯ ಅನುಮೋದನೆಗಾಗಿ ಕಾಯದೆ ನೇರವಾಗಿ ಅನುದಾನ ಬಿಡುಗಡೆ ಮಾಡಲು ವಿಶೇಷ ವ್ಯವಸ್ಥೆ ಜಾರಿಯಾದರೆ ಶಾಲಾ ಮೂಲಸೌಕರ್ಯ ಅಭಿವೃದ್ಧಿ ಪ್ರಮುಖ ಯೋಜನೆಗಳು ಕಾಲಮಿತಿಯಲ್ಲಿ ಪೂರ್ಣಗೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

# ಸರ್ವ ರೀತಿಯ ಪ್ರಗತಿಗೆ ಶಿಕ್ಷಣವೇ ಭದ್ರ ಬುನಾದಿ

## ಹಾಸನದಲ್ಲಿ ಶಿಕ್ಷಕರ ದಿನಾಚರಣೆ | ಸಚಿವ ಕೆ.ಎಂ.ಶಿವಲಿಂಗೇಗೌಡ ಉದ್ಘಾಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದೇಶ, ರಾಜ್ಯ ಪ್ರಗತಿ ಪಥದಲ್ಲಿ ಸಾಗಲು ಶಿಕ್ಷಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಹಾಸನಾಂಬ ಕಲಾಕ್ಷೇತ್ರದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ವಿದ್ಯೆಯನ್ನು ನೀಡುವುದು ಶಿಕ್ಷಕರ ಆದ್ಯ ಕರ್ತವ್ಯವಾಗಿದೆ. ಹೆಚ್ಚಿನ ರೀತಿಯಲ್ಲಿ ಶಿಕ್ಷಕರು ಒಳ್ಳೆಯ ಕೆಲಸ ಮಾಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ಚರ್ಚಾಸ್ಪರ್ಧೆ ಏರ್ಪಡಿಸುತ್ತೇವೆ. ಇಂದಿನ ದಿನಗಳಲ್ಲಿ ವಿದ್ಯಾಭ್ಯಾಸ ಎನ್ನುವುದು ವ್ಯಾಪಾರೀಕರಣವಾಗಿದ್ದು, ಉಳ್ಳವರ ಸ್ವತ್ತಾಗಿದೆ ಎಂದರು.

ಪ್ರಪಂಚ ವೈಜ್ಞಾನಿಕವಾಗಿ ಬೆಳೆದು ನಿಂತಿದೆ. ಪ್ರಪಂಚದ ಆಡಳಿತ ವ್ಯವಸ್ಥೆಯಲ್ಲಿ ಪಾಲ್ಗೊಳ್ಳಬೇಕು ಎಂದರೆ ಭಾಷೆ ವ್ಯವಸ್ಥೆ ಅಡ್ಡವಾಗಿ ನಿಂತಿದೆ. ಆದ್ದರಿಂದ ಆಂಗ್ಲ ಭಾಷೆ ಕಲಿಯುವುದು ಅತಿ ಮುಖ್ಯವಾಗಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮಕ್ಕೆ ಹೆಚ್ಚಿನ ಪ್ರಧಾನ್ಯತೆ ಇಲ್ಲದೆ ಆಧುನಿಕ ವಿದ್ಯಾಭ್ಯಾಸದಿಂದ ಬಡ ಮಕ್ಕಳು ಶಿಕ್ಷಣದಲ್ಲಿ ತೊಂದರೆ ಉಂಟಾಗುತ್ತಿದೆ. ಸರ್ಕಾರಿ ರಂಗದಲ್ಲಿ ಬಡವರಿಗೆ ನ್ಯಾಯ ನೀಡಬೇಕು. ಖಾಸಗಿ ರಂಗದಲ್ಲಿ ಓದಿದವರಿಗೆ ಮಾತ್ರ ಪ್ರಪಂಚದಲ್ಲಿ ಪಾಲ್ಗೊಳ್ಳಲು ಸಾಧ್ಯವಿದೆ. ಅದಕ್ಕೆ ಸರ್ಕಾರಿ ಶಾಲೆಗಳಲ್ಲಿಯೂ ಸಹ ಇಂಗ್ಲಿಷ್ ಮಾಧ್ಯಮದಲ್ಲಿ ಕಲಿಸಲು ಕೆಲವು ಸುಧಾರಣೆ ಆಗಬೇಕು. ಈ ನಿಟ್ಟಿನಲ್ಲಿ ಶಿಕ್ಷಕರಿಗೆ ತರಬೇತಿ ನೀಡಿ ಪರಿಪಕ್ವತೆಯಿಂದ ಸಜ್ಜುಗೊಳಿಸಬೇಕಿದೆ ಎಂದು ತಿಳಿಸಿದರು.

ಇಂಗ್ಲಿಷ್ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಕಲಿತರೆ ನಮ್ಮ ಮಕ್ಕಳಿಗೆ ಪ್ರಪಂಚದಲ್ಲಿ ಭವಿಷ್ಯವಿದೆ ಎಂಬುದನ್ನು ಒಬ್ಬ ಸಾಮಾನ್ಯ ರೈತ ಅರಿತಿದ್ದಾರೆ. ಇಂಗ್ಲಿಷ್ ಮಾಧ್ಯಮದಲ್ಲಿ ಕಲಿಯುವುದು ತಪ್ಪು ಎಂದು ಹೇಳುವುದಿಲ್ಲ. ಪ್ರಪಂಚದಲ್ಲಿ ಎಲ್ಲೇ ಹೋದರು ಸಹ ಇಂಗ್ಲಿಷ್‌ನಲ್ಲಿ ಮಾತನಾಡಿ ಹೊರ ಬರಬಹುದು. ಅದಕ್ಕೆ ಇಂಗ್ಲಿಷ್‌ಗೆ ಮಹತ್ವ ಬಂದಿದೆ. ಆದರೆ ನಮ್ಮ ಮಾತೃಭಾಷೆ ಕನ್ನಡವನ್ನು ಇನ್ನೂ ಹೆಚ್ಚಿನ ಮಟ್ಟದಲ್ಲಿ ಅಭ್ಯಾಸ ಮಾಡಿ ಪರಿಣಿತರಾಗೋಣ ಎಂದರು.



ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಶಿಕ್ಷಕರಿಗೆ ಅಪಾರವಾದ ಗೌರವವನ್ನು ನೀಡುವ ದಿನವೆಂದರೆ ಅದು ಶಿಕ್ಷಕರ ದಿನಾಚರಣೆಯಾಗಿದ್ದು, ವಿದ್ಯಾರ್ಥಿಗಳು ಶಿಕ್ಷಕರನ್ನು ದೇವರ ಸ್ಥಾನದಲ್ಲಿ ನೋಡಬೇಕು ಎಂದು ಹೇಳಿದರು.

ತಂದೆ-ತಾಯಿಯಷ್ಟೇ ಸಮಾನರಾಗಿ ಇರುವವರು ಶಿಕ್ಷಕರು. ಒಬ್ಬ ವ್ಯಕ್ತಿ ಜೀವನದಲ್ಲಿ ವಿವಿಧ ಹಂತದಲ್ಲಿ ಸಾಧನೆ ಮಾಡಿದ್ದಾರೆ ಎಂದರೆ ಅದಕ್ಕೆ ಮೂಲ ಕಾರಣ ಶಿಕ್ಷಕರು. ರಾಜ್ಯದಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ನಮ್ಮ ಜಿಲ್ಲೆ 4ನೇ ಸ್ಥಾನದಲ್ಲಿ ಇದೆ. ಅದಕ್ಕೆ ಮುಖ್ಯ ಕಾರಣಕರ್ತರು ಶಿಕ್ಷಕರು. ಶಿಕ್ಷಕರಿಗೆ ಶಾಲೆ ಮಾತ್ರವಲ್ಲ ಅನೇಕ ಜವಾಬ್ದಾರಿಗಳು ಇರುತ್ತದೆ. ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಪಿ. ಸ್ವರೂಪ್ ಮಾತನಾಡಿ, ಯಾವುದೇ ಒಬ್ಬ ವ್ಯಕ್ತಿ ದೊಡ್ಡ ಮಟ್ಟಕ್ಕೆ ಏರಬೇಕು ಎಂದರೆ ಅದಕ್ಕೆ ಶಿಕ್ಷಕರು ವಿಶೇಷವಾಗಿ ಕಾರಣಕರ್ತರಾಗಿರುತ್ತಾರೆ. ವಿವಿಧ ಒತ್ತಡಗಳು ಇದ್ದರು ಸಹ ಪ್ರಾಮಾಣಿಕವಾಗಿ ಶಿಕ್ಷಕರ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ತುಮಕೂರು ವಿಶ್ವವಿದ್ಯಾನಿಲಯದ ಡೀನ್ ಶಿಕ್ಷಣ ನಿಕಾಯ, ಶಿಕ್ಷಣ ತಜ್ಞರು ವಿಶ್ರಾಂತ ಪ್ರಾಂಶುಪಾಲ ಡಾ. ಆರ್. ಓಂಬಳೇಶ್ ಘಟ್ಟಿ ಉಪನ್ಯಾಸ ನೀಡಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ, ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಟೇಲ್ ಶಿವಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ರಂಜಿತ್ ಗೊರೂರು, ರಾಜ್ಯ ಸರ್ಕಾರಿ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಕೃಷ್ಣೆಗೌಡ ಇತರರಿದ್ದರು.

# ಬಸವನಹಟ್ಟಿಯಲ್ಲಿ ವ್ಯಕ್ತಿಯ ಬರ್ಬರ ಕೊಲೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಬಸವನಹಟ್ಟಿ ಗ್ರಾಮದಲ್ಲಿ ವ್ಯಕ್ತಿಯೊಬ್ಬರ ಬರ್ಬರ ಹತ್ಯೆಯಾಗಿದೆ.

ಹಳೆಯ ದ್ವೇಷದಿಂದ ದುಷ್ಕರ್ಮಿಗಳು ಕೃತ್ಯ ಎಸಗಿದ್ದಾರೆ ಎನ್ನಲಾಗಿದೆ. ಗ್ರಾಮದ ಮೋಹನ್ (36) ಮೃತರು. ಕೃಷಿಕರಾಗಿದ್ದ ಅವರು ಶುಕ್ರವಾರ ರಾತ್ರಿ ಶುಂಠಿ ಬೆಳೆಗೆ ನೀರು ಹಾಯಿಸಲೆಂದು ಜಮೀನಿಗೆ ತೆರಳಿದ್ದರು. ಅವರು ಅಲ್ಲಿ ಇರುವುದನ್ನು ಖಚಿತಪಡಿಸಿಕೊಂಡಿದ್ದ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆಗೈದಿದ್ದಾರೆ.

ನಿತ್ಯ ಜಮೀನಿನಲ್ಲಿ ಭೇಟಿಯಾಗುತ್ತಿದ್ದ ಕಾಳೇನಹಳ್ಳಿ ಹಟ್ಟಿ ಗ್ರಾಮದ ಮಂಜಣ್ಣ ಎಂಬುವವರು ಮೃತದೇಹ ಕಂಡು ಗ್ರಾಮದ ಗುರುರಾಜು ಅವರಿಗೆ ವಿಷಯ ತಿಳಿಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ಮೃತರ ಪತ್ನಿ ಜಯಲಕ್ಷ್ಮಿ ಅವರು ಸ್ಥಳಕ್ಕೆ ಭೇಟಿ ನೀಡಿದಾಗ ಮೋಹನ್ ರಕ್ತದ ಮಡುವಿನಲ್ಲಿ ಬಿದ್ದಿರುವುದು ಕಂಡಿದೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಪಘಾತ: ಯುವಕ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ರಸ್ತೆಗೆ ಅಡ್ಡಲಾಗಿ ಬಂದ ನಾಯಿಗೆ ಡಿಕ್ಕಿಯಾಗುವುದನ್ನು ತಪ್ಪಿಸಲು ಜೋರಾಗಿ ಬ್ರೇಕ್ ಹಾಕಿದ ಪರಿಣಾಮ ನಿಯಂತ್ರಣ ತಪ್ಪಿ ಕೆಳಗೆ ಬಿದ್ದ ಬೈಕ್ ಸವಾರ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಮರಸು ಸಮೀಪ ನಡೆದಿದೆ.

ತಾಲ್ಲೂಕಿನ ಅಗಸರಹಟ್ಟಿ ಗ್ರಾಮದ ಸುರೇಶ್ (29) ಮೃತರು. ಸೆ. 2ರಂದು ಸ್ನೇಹಿತರನ್ನು ಮರಸು ಗ್ರಾಮಕ್ಕೆ ಬಿಟ್ಟು ವಾಪಾಸ್ ಬರುತ್ತಿದ್ದಾಗ ಇಳಿಜಾರು ರಸ್ತೆಯಲ್ಲಿ ಏಕಾಏಕಿ ನಾಯಿಯೊಂದು ಅಡ್ಡಬಂದಿದೆ. ಡಿಕ್ಕಿಯಾಗುವುದನ್ನು ತಪ್ಪಿಸಲು ಜೋರಾಗಿ ಬ್ರೇಕ್ ಹಾಕಿದ್ದರಿಂದ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ತಕ್ಷಣವೇ ಹಿಮ್ಸ್‌ಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಶುಕ್ರವಾರ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬರ ಚರ್ಚೆ ಬಿಟ್ಟು ಬಿಜೆಪಿ ರಾಜಕೀಯ ದೊಂಬರಾಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಾಜಿ ಸಚಿವ ಬಿ. ನಾಗೇಂದ್ರ ಅವರ ವಿಚಾರ ಮುಂದಿಟ್ಟುಕೊಂಡು ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಜನಪರ ಹೋರಾಟವಲ್ಲ, ರಾಜಕೀಯ ಲಾಭಕ್ಕಾಗಿ ನಡೆಸುತ್ತಿರುವ ದೊಂಬರಾಟ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇವಲ ಆರೋಪ ಬಂದ ಮಾತ್ರಕ್ಕೆ ಯಾರನ್ನೂ ಅಪರಾಧಿ ಎಂದು ಘೋಷಿಸಲು ಸಾಧ್ಯವಿಲ್ಲ. ಆರೋಪ ಸಾಬೀತಾದ ಬಳಿಕ ನ್ಯಾಯಾಂಗ ಹಾಗೂ ಸಂವಿಧಾನದ ಚೌಕಟ್ಟಿನಲ್ಲಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಬಿಜೆಪಿ ತನ್ನ ರಾಜಕೀಯ ಪ್ರತಿಷ್ಠೆಗಾಗಿ ವಿಧಾನಮಂಡಲದ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿದೆ. ರಾಜ್ಯದ ಹಲವು ಭಾಗಗಳಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಬರದ ಕುರಿತು ಚರ್ಚೆ ನಡೆಸುವುದನ್ನು ಬಿಟ್ಟು ನಾಗೇಂದ್ರ ಪ್ರಕರಣವನ್ನು ಮುಂದಿಟ್ಟುಕೊಂಡು ಸದನದ ಕಲಾಪಕ್ಕೆ ಅಡ್ಡಿಪಡಿಸಿರುವುದು ಸರಿಯಲ್ಲ ಎಂದು ಟೀಕಿಸಿದರು.

ನಾವು ಜಿಲ್ಲೆಗಳಿಗೆ ತೆರಳಿ ಬರ ಪರಿಸ್ಥಿತಿಯನ್ನು ಪರಿಶೀಲಿಸುತ್ತಿದ್ದೇವೆ. ರೈತರ ಬೆಳೆ ಹಾನಿ, ನೀರಿನ ಲಭ್ಯತೆ ಹಾಗೂ ಕೃಷಿ ಪರಿಸ್ಥಿತಿಯ ಕುರಿತು ಮಾಹಿತಿ ಸಂಗ್ರಹಿಸಿ ಸದನದಲ್ಲಿ ಚರ್ಚಿಸುವ ಮೂಲಕ ಪರಿಹಾರ ಒದಗಿಸುವ ಮಾರ್ಗೋಪಾಯಗಳನ್ನು ರೂಪಿಸಬೇಕಾಗಿದೆ. ಆದರೆ ಬಿಜೆಪಿ ಯಾವುದೇ ಚರ್ಚೆಗೆ ಅವಕಾಶ ನೀಡದೆ ರಾಜಕೀಯ ವಿಷಯವನ್ನೇ ಮುನ್ನೆಲೆಗೆ ತಂದಿದೆ ಎಂದು ದೂರಿದರು.

ಹೊಲಗಳಿಗೆ ತೆರಳಿ ಬೆಳೆ ಅಥವಾ ತೆನೆ ತೋರಿಸುವುದರಿಂದ ರೈತರ ಸಮಸ್ಯೆ ಪರಿಹಾರವಾಗುವುದಿಲ್ಲ. ಬೆಳೆ ಹಾನಿಗೊಳಗಾದ ರೈತರಿಗೆ ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ನಡೆಸಬೇಕು. ಜನರ ಸಂಕಷ್ಟವನ್ನು ರಾಜಕೀಯಕ್ಕೆ ಬಳಸಿಕೊಳ್ಳುವುದನ್ನು ರಾಜ್ಯದ ಜನರು ಒಪ್ಪುವುದಿಲ್ಲ ಎಂದು ಹೇಳಿದರು. ಬರ ಪರಿಸ್ಥಿತಿ ಕುರಿತು ಸದನದಲ್ಲಿ ಇನ್ನೂ ಮೂರು ದಿನಗಳ ಕಾಲ ಸಮಗ್ರ ಚರ್ಚೆ ನಡೆಸಿ, ರೈತರಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಶಿವಲಿಂಗೇಗೌಡ ಒತ್ತಾಯಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದ ಅವರು, ದೇಶಾದ್ಯಂತ ಅಲ್ಲೋಲ-ಕಲ್ಲೋಲ ಸೃಷ್ಟಿಯಾಗುವುದಾದರೆ ಅದರ ಪರಿಣಾಮ ಅವರ ನೇತೃತ್ವದ ಕೇಂದ್ರ ಸರ್ಕಾರದ ಮೇಲೂ ಆಗಬೇಕಲ್ಲವೇ? ಅವರು ಭಾರತ ದೇಶದಲ್ಲೇ ಇದ್ದಾರೆಯೇ ಎಂದು ಪ್ರಶ್ನಿಸಿದರು.

ಕುಮಾರಸ್ವಾಮಿ ಅವರು ಇತ್ತೀಚಿನ ದಿನಗಳಲ್ಲಿ ನೀಡುತ್ತಿರುವ ಕೆಲವು ಹೇಳಿಕೆಗಳು ನಿರಾಶಾದಾಯಕವಾಗಿವೆ. ವೈಯಕ್ತಿಕವಾಗಿ ಯಾರನ್ನೂ ಟೀಕಿಸುವ ಉದ್ದೇಶ ನನಗಿಲ್ಲ. ಆದರೆ ಜವಾಬ್ದಾರಿಯುತ ಸ್ಥಾನದಲ್ಲಿರುವವರು ಇಂತಹ ನಿರಾಶಾದಾಯಕ ಹೇಳಿಕೆಗಳನ್ನು ನೀಡುವುದು ಸೂಕ್ತವಲ್ಲ ಎಂದು ಸಚಿವರು ಹೇಳಿದರು.

ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಜನರ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು. ರೈತರು ಬರದಿಂದ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ರಾಜಕೀಯ ಸಂಘರ್ಷಕ್ಕಿಂತ ಪರಿಹಾರ ಕ್ರಮಗಳತ್ತ ಗಮನ ಹರಿಸುವುದು ಎಲ್ಲ ಪಕ್ಷಗಳ ಜವಾಬ್ದಾರಿಯಾಗಿದೆ ಎಂದು ಶಿವಲಿಂಗೇಗೌಡ ಹೇಳಿದರು.

# ಶಿಕ್ಷಕರ ಕೊರತೆಯಿಂದ ಸಮಸ್ಯೆಗಳು ಅಧಿಕ: ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕೊರತೆಯಿಂದಾಗಿ ಲಭ್ಯವಿರುವ ಪಠ್ಯ ಶಿಕ್ಷಕರ ಮೇಲೆ ಕೆಲಸದ ಒತ್ತಡ ಗಣನೀಯವಾಗಿ ಹೆಚ್ಚಾಗಿದೆ. ಇದು ಇತ್ತೀಚಿನ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಎದುರಾಗುತ್ತಿರುವ ಪ್ರಮುಖ ಸವಾಲುಗಳಲ್ಲಿ ಒಂದಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಪಂಚಾಯಿತಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳ ಕಾರ್ಯಾಲಯ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆ, (ಪ್ರಾಥಮಿಕ ಶಾಲಾ ವಿಭಾಗ) ಪೇಟೆ ಸಂಯುಕ್ತಾಶ್ರಯದಲ್ಲಿ 2026-27ನೇ ಸಾಲಿನ ಕಸಬಾ ಹೋಬಳಿ ಮಟ್ಟದ 14 ವರ್ಷದ ವಯೋಮಾನದೊಳಗಿನ ವಿದ್ಯಾರ್ಥಿಗಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಬಹುತೇಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕೊರತೆ ಹೆಚ್ಚಾಗಿದೆ. ಶಿಕ್ಷಣ ಇಲಾಖೆಯ ಮಾಹಿತಿಯಂತೆ, ತಾಲೂಕಿನಲ್ಲಿ ಒಟ್ಟು 150 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, 5 ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ದೈಹಿಕ ಶಿಕ್ಷಣ ಶಿಕ್ಷಕರ



ಕೊರತೆಯಿಂದ ಸರ್ಕಾರಿ ಶಾಲೆಗಳಲ್ಲಿ ಕ್ರೀಡಾ ತರಬೇತಿ ನೀಡುವ ಜವಾಬ್ದಾರಿಯೂ ಸಾಮಾನ್ಯ ಶಿಕ್ಷಕರ ಮೇಲಿದೆ. ದೈಹಿಕ ಶಿಕ್ಷಣವು ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಅತ್ಯಗತ್ಯವಾಗಿದ್ದು, ಅದರ ಜವಾಬ್ದಾರಿಯನ್ನು ಪಠ್ಯ ಶಿಕ್ಷಕರು ನಿಭಾಯಿಸಬೇಕಾಗಿ ಬಂದಾಗ ಶಿಕ್ಷಣದ ಗುಣಮಟ್ಟ ಮತ್ತು ಶಿಕ್ಷಕರ ಆರೋಗ್ಯ ಎರಡರ ಮೇಲೂ ಪರಿಣಾಮ ಬೀರುತ್ತದೆ ಮತ್ತು ವಿದ್ಯಾರ್ಥಿಗಳಲ್ಲಿ ಪ್ರಾಥಮಿಕ ಹಂತದಲ್ಲಿಯೇ ಕ್ರೀಡಾಸಕ್ತಿಯನ್ನು ಬೆಳೆಸುವುದು ಅವರ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅತ್ಯಂತ ಅವಶ್ಯಕವಾಗಿದೆ ಈ ನಿಟ್ಟಿನಲ್ಲಿ ಪ್ರತಿ ಕ್ಲಸ್ಟರ್ ಒಬ್ಬರಂತೆ ದೈಹಿಕ ಶಿಕ್ಷಕರನ್ನು ನೇಮಿಸಲು ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು.

ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಕ್ರೀಡೆಗಳು ಮಹತ್ವದ ಪಾತ್ರ ವಹಿಸುತ್ತವೆ. ಪ್ರತಿಯೊಬ್ಬರು ದೈಹಿಕವಾಗಿ ಬಲಿಷ್ಠರಾದಾಗ ಮಾತ್ರ ಮಾನಸಿಕವಾಗಿ ಏನಾದರೂ ಸಾಧಿಸಲು ಸಾಧ್ಯ. ಆದ್ದರಿಂದ ಪಾಠದೊಂದಿಗೆ ಪಠ್ಯೇತರ ಚಟುವಟಿಕೆ ಅತಿ ಪ್ರಮುಖ. ವಿದ್ಯಾರ್ಥಿಗಳು ಕಲಿಕಾಸಕ್ತಿ ಜತೆಗೆ ಕ್ರೀಡೆಗಳಲ್ಲಿ ಪಾಲ್ಗೊಂಡು ದೈಹಿಕ ಹಾಗೂ ಮಾನಸಿಕ ಬೆಳವಣಿಗೆಯನ್ನು ಇನ್ನಷ್ಟು ವೃದ್ಧಿಸಿಕೊಳ್ಳಬೇಕು. ಕ್ರೀಡೆಗಳಿಂದ ಬುದ್ಧಿ ಚುರುಕಾಗುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಸ್ಪರ್ಧಾಸ್ಫೂರ್ತಿಯಿಂದ ಭಾಗವಹಿಸಬೇಕು, ಶಿಕ್ಷಣದಷ್ಟೇ ಆದ್ಯತೆ ಕ್ರೀಡೆಗಳಿಗೂ ಇರಬೇಕು. ಯುವ ಪ್ರತಿಭೆಗಳು ಶಾಲೆಗಳಲ್ಲಿ ಆಯೋಜಿಸುವ ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ರಾಜ್ಯ, ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು. ಕ್ರೀಡೆಯಲ್ಲಿ ರಾಜ್ಯಮಟ್ಟವನ್ನು ಪ್ರತಿನಿಧಿಸುವವರಿಗೆ ವಿಶೇಷ ನೆರವು ನೀಡಲಾಗುವುದು. ಮಕ್ಕಳ ಆಸಕ್ತಿಯನ್ನು ಗಮನಿಸಿ ಶಿಕ್ಷಕರು ಅವರನ್ನು ಪ್ರೋತ್ಸಾಹಿಸಬೇಕು. ಸೋಮವಾರ ಪ್ರೌಢಶಾಲಾ ಹಂತದ ತಾಲೂಕು ಮಟ್ಟದ ಕ್ರೀಡಾಕೂಟ ನಡೆಯಲಿದ್ದು ಎಲ್ಲ ಸಹಕಾರ ನೀಡಲಾಗುವುದು. ಕ್ರೀಡೆಯಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ. ಸೋಲು ಯಾವುದೇ ಕಾರಣಕ್ಕೂ ನಿರಾಶೆ ಉಂಟು ಮಾಡದೇ ಪುನಃ ಗೆಲ್ಲುವ ಛಲ ಹುಟ್ಟಿಸಬೇಕು ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಚ್.ಸತೀಶ್ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ ಕೆ.ಎನ್.ಅನಿಲ್ ತಂಡಗಳ ಪರಿಚಯ ಮಾಡಿಕೊಂಡರು, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಕ್ರೀಡಾಜ್ಯೋತಿ ಸ್ವಾಗತಿಸಿದರು. ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಕೆ.ಟಿ.ಆನಂದ್, ಅನ್ನ ದಾಸೋಹ ಸಹಾಯಕ ನಿರ್ದೇಶಕ ಎಚ್ .ಡಿ.ಉಮಾಶಂಕರ್, ಟಿಎಪಿಸಿಎಂಎಸ್ ಅಧ್ಯಕ್ಷ ಎಚ್.ಆರ್.ವೆಂಕಟೇಶಮೂರ್ತಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸಿ.ಎನ್. ಗೋಪಾಲ್, ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ಟಿ. ಮಂಜೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಜಿ.ದ್ಯಾವೇಗೌಡ, ಪ್ರಧಾನ ಕಾರ್ಯದರ್ಶಿ ಸಿ.ಆರ್. ಮಂಜುನಾಥ, ಸಂಘಟನಾ ಕಾರ್ಯದರ್ಶಿ ರೇವಣ ಸ್ವಾಮಿ, ರಾಜ್ಯ ಪರಿಷತ್ ಸದಸ್ಯ ಎ.ಎಸ್.ಪ್ರಮೋದ್, ಶಿಕ್ಷಣ ಸಂಯೋಜಕ ಜಿ.ಇ.ಲೋಕೇಶ್ ಮತ್ತಿತರರಿದ್ದರು.

# ಪತ್ರಕರ್ತರಿಗೆ ರಾಖಿ ಕಟ್ಟಿದ ಸಹೋದರಿಯರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ರೋಟರಿ ಇನರ್‌ವಿಲ್ ಸಂಸ್ಥೆಯ ಸೋದರಿಯರು ಕಾರ್ಯನಿರತ ಪತ್ರಕರ್ತರಿಗೆ ರಾಖಿ ಕಟ್ಟುವ ಮೂಲಕ ಬಾಂಧವ್ಯ ಬೆಸೆದರು.

ಸೋದರತ್ವದ ಅಕ್ಕರೆಯೊಂದಿಗೆ ರಾಖಿ ಕಟ್ಟಿದ ಸೋದರಿಯರಿಗೆ ಹಿರಿಯ ಪತ್ರಕರ್ತರು ಶುಭ ಹಾರೈಸಿದರೆ ಕಿರಿಯ ಪತ್ರಕರ್ತರು ಸೋದರಿಯರ ಆಶೀರ್ವಾದ ಪಡೆದು ಪರಸ್ಪರ ಸಿಹಿ ತಿನಿಸುವ ಮೂಲಕ ರಕ್ಷಾಬಂಧನ ಕಾರ್ಯಕ್ರಮದ ಸಂತಸದ ಕ್ಷಣಕ್ಕೆ ಸಾಕ್ಷಿಯಾದರು.

ರೋಟರಿ ಇನ್ನರ್ ವಿಲ್ ಸಂಸ್ಥೆ ಅಧ್ಯಕ್ಷೆ ಶ್ವೇತಾ ಮೋಹನ್ ಮಾತನಾಡಿ, ಭೂಮಿ ಮೇಲೆ ಇರುವ ಜೀವಿಗಳಲ್ಲಿ ಅತ್ಯಂತ ಬುದ್ಧಿವಂತ ಜೀವಿ ಎಂದು ಕರೆಯಲ್ಪಡುವ ಮನುಷ್ಯ ಜೀವಿಯು ಹಲವು ಸಂಬಂಧಗಳಿಂದ ಕೂಡಿದೆ. ಅದರಲ್ಲಿ ಸೋದರತ್ವ ಎಂಬುದು ವಿಶೇಷವಾದ ಸಂಬಂಧ ಒಡಹುಟ್ಟಿದವರು ಮಾತ್ರ ಸೋದರ ಸೋದರಿಯಾಗಬೇಕೆಂದೇನಿಲ್ಲ. ಅದರ ಮಹತ್ವವನ್ನ ಅರಿತಿದ್ದ ಸ್ವಾಮಿ ವಿವೇಕಾನಂದರು ಪಾಶ್ಚಾತ್ಯ ನೆಲದಲ್ಲಿ ನಿಂತು ಸೋದರ ಸೋದರಿಯರೇ ಎನ್ನುವ ಮೂಲಕ ಜಗತ್ತಿಗೆ ಸೋದರತ್ವದ ಸಂಬಂಧವನ್ನು ಸಾರಿದರು ಅಂತಹ ಸೋದರ ಸಂಬಂಧ ಸಾರುವ ಪ್ರತಿಕವಾಗಿರುವ ರಕ್ಷಾಬಂಧನ ಕಾರ್ಯಕ್ರಮವನ್ನು ಪತ್ರಕರ್ತ ಸಹೋದರರೊಂದಿಗೆ ಆಚರಿಸುತ್ತಿರುವುದು ನಮ್ಮೆಲ್ಲರಿಗೂ ಸಂತಸ ತಂದಿದೆ ಎಂದರು.

ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಟಿ. ಆನಂದ್ ಮಾತನಾಡಿ, ಒಂದು ಹೆಣ್ಣು ಕಷ್ಟ-ನಷ್ಟ ಅಥವಾ ನೋವಿಗೆ ಸಿಲುಕಿದ ಸಂದರ್ಭದಲ್ಲಿ ಮೊದಲಿಗೆ ಅವಳ ನೆರವಿಗೆ ಬರುವುದು ಅಣ್ಣ. ಈ ನಂಬಿಕೆ ಭಾರತೀಯ ಹೆಣ್ಣು ಮಕ್ಕಳಲ್ಲಿದೆ ಎಂದರು.

ಸಂಘದ ಪ್ರಧಾನ ಕಾರ್ಯದರ್ಶಿ ನವೀನ್ ಕುಮಾರ್, ಮಾಜಿ ಅಧ್ಯಕ್ಷ ರಾಮಚಂದ್ರ, ಕಾರ್ಯದರ್ಶಿ ಸ್ವಾಮಿ, ರೋಟರಿ ಇನ್ನರ್ ವಿಲ್ ಕಾರ್ಯದರ್ಶಿ ಆರತಿ ಸಂತೋಷ್, ಖಜಾಂಚಿ ರೇಖಾ, ಐಎಸ್‌ಒ ಗೀತಾ ಧರ್ಮ ನಾಯ್ಕ್, ನಿರ್ದೇಶಕಿ ಸವಿತಾ ಮತ್ತಿತರರಿದ್ದರು.

# ಕೆಆರ್‌ಎಸ್ ಪಕ್ಷದ ಮುಖಂಡರಿಂದ ಕಿರುಕುಳ ಹಿಮ್ಸ್ ಸ್ವಚ್ಛತಾ ಸಿಬ್ಬಂದಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಸ್ವಚ್ಛತಾ ಸಿಬ್ಬಂದಿಗೆ ಕೆಆರ್‌ಎಸ್ ಪಕ್ಷದ ಮುಖಂಡರಿಂದ ಕಿರುಕುಳ ನಡೆಯುತ್ತಿದೆ ಎಂದು ಆರೋಪಿಸಿ ಹಿಮ್ಸ್ ಆವರಣದಲ್ಲಿ ಸಿಬ್ಬಂದಿ ಮೌನ ಪ್ರಭಟನೆ ನಡೆಸಿದರು.

ಸಿಬ್ಬಂದಿ ಲಲಿತಾ ಮಾತನಾಡಿ, ನಮಗೆ ಕೆಆರ್ ಎಸ್ ಪಕ್ಷದ ಮುಖಂಡರು ದಿನನಿತ್ಯ ನಮಗೆ ಕೆಲಸ ಮಾಡಲು ಅಡ್ಡಿ ಪಡಿಸುತ್ತಿದ್ದಾರೆ. ಕೆಲಸ ಮಾಡುವ ಸ್ಥಳಕ್ಕೆ ಏಕಾಏಕಿ ಬಂದು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಹಿಂಸೆ ನೀಡುತ್ತಿದ್ದಾರೆ ಎಂದು ಅಳಲು ತೋಡಿಕೊಂಡರು.

ನಮ್ಮ ತಪ್ಪಿದ್ದರೆ ಕಾನೂನು ಬದ್ಧವಾಗಿ ಹೋರಾಟ ಮಾಡಲಿ. ಮೇಲಾಧಿಕಾರಿಗಳಿಗೆ ಮನವಿ ನೀಡಲಿ ಅದನ್ನು ಬಿಟ್ಟು ಶೌಚಾಲಯ ಹಾಗೂ ಇನ್ನಿತರ ಸ್ಥಳಗಳಲ್ಲಿ ಸ್ವಚ್ಛತೆ ಮಾಡುವಾಗ ನಮ್ಮ ವಸ್ತ್ರ ಯಾವ ರೀತಿ ಇದೆ ಎಂಬುದನ್ನು ಲೆಕ್ಕಿಸದೆ ವೀಡಿಯೋ



ಮಾಡಿ ನಮ್ಮ ಮರ್ಯಾದೆ ಕಳೆಯುವ ಕೆಲಸ ಮಾಡುತ್ತಿದ್ದಾರೆ. ಇದರಿಂದ ಸಮಾಜದಲ್ಲಿ ನಾವು ತಲೆ ಎತ್ತಿ ಓಡಾಡದಂತೆ ಆಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಬೆಳಿಗ್ಗೆ ಕೆಲಸಕ್ಕೆ ಬೇಗ ಬರುವ ಸಲುವಾಗಿ ಕೆಲವೊಮ್ಮೆ ಉಪಾಹಾರ ಸೇವಿಸಿರುವುದಿಲ್ಲ. ಆದಕಾರಣ ಆಸ್ಪತ್ರೆಯ ಮೇಲಾಧಿಕಾರಿಗಳಿಗೆ ಮನವಿ ಮಾಡಿ ಉಪಹಾರ ಸೇವಿಸಲು ಗೇಟಿನಿಂದ ಹೊರಗೆ ಹೋದಾಗ ಅಲ್ಲಿಯೂ ಹಿಂದೆಯೇ ಬಂದು ವಿಡಿಯೋ ಮಾಡುವುದು ಫೋಟೋ ತೆಗೆದು ಜೊತೆಗೆ ಅವರಿಗೆ ಸಂಬಂಧವಿಲ್ಲದ ಪ್ರಶ್ನೆಗಳನ್ನು ಕೇಳಿ ನಮಗೆ ಚಿತ್ರ ಹಿಂಸೆ ನೀಡುತ್ತಿದ್ದಾರೆ ಎಂದರು.

ಕೆಆರ್‌ಎಸ್ ಪಕ್ಷದವರಿಗೆ ನಮ್ಮ ಮೇಲೆ ಅಷ್ಟೊಂದು ಕಾಳಜಿ ಇದ್ದರೆ ನಮಗೆ ಆಗುತ್ತಿರುವ ಅನ್ಯಾಯಗಳ ವಿರುದ್ಧ ಹೋರಾಟ ಮಾಡಲಿ. ನಮಗೆ ಕನಿಷ್ಟ ವೇತನ ಜಾರಿಗಾಗಿ ಈಗಾಗಲೇ ನಡೆಯುತ್ತಿರುವ ಹೋರಾಟಕ್ಕೆ ಕೈಜೋಡಿಸಲಿ ಅದನ್ನು ಬಿಟ್ಟು ಈ ರೀತಿ ನಮ್ಮನ್ನು ತೇಜೋವಧೆ ಮಾಡುವುದು ನಮಗೆ ಕಿರುಕುಳ ನೀಡುವುದು ಸರಿಯಲ್ಲ. ಇತ್ತೀಚೆಗೆ ನಡೆದ ಖಾಸಗಿ ಆಸ್ಪತ್ರೆ ಕೆಲಸದ ವಿಚಾರವಾಗಿ ಹೇಳುವುದಾದರೆ ತಮ್ಮ ಕೆಲಸದ ಅವಧಿ ಮುಗಿದ ನಂತರ ಅಲ್ಲಿ ಪಾರ್ಟ್ ಟೈಮ್‌ಗಾಗಿ ಕೆಲವರು ಹೋಗಿದ್ದಾರೆ. ಇಲ್ಲಿ ನೀಡುವ ಸಂಬಳ ಸಾಲದೆ ಇದ್ದಾಗ ಬೇರೆಕಡೆ ಹೆಚ್ಚಿನ ಅವಧಿ ಕೆಲಸ ಮಾಡಿ ಜೀವನ ನಿರ್ವಹಣೆ ಮಾಡುತ್ತಿದ್ದೇವೆ ಆದರೆ ಕೆಆರ್‌ಎಸ್ ಪಕ್ಷವರು ನಮ್ಮ ಹೊಟ್ಟೆಯ ಮೇಲೆ ಹೊಡೆಯುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

# ದೇಶದ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ದೇಶದ ಭವಿಷ್ಯ ರೂಪಿಸುವಂತಹ ಸಮಾಜ ನಿರ್ಮಾಣ ಮಾಡುವಲ್ಲಿ ಶಿಕ್ಷಕರ ಪಾತ್ರ ಮಹತ್ವ ಪಡೆದಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದ ಒಕ್ಕಲಿಗರ ಸಮುದಾಯ ಭವನದಲ್ಲಿ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಶಿಕ್ಷಕರ ದಿನಾಚರಣೆ ಸಮಿತಿ ವತಿಯಿಂದ ಏರ್ಪಡಿಸಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳಿಗೆ ನೀಡುವ ಸಂಸ್ಕಾರಯುತ ಶಿಕ್ಷಣದಲ್ಲಿ ದೇಶದ ಭವಿಷ್ಯ ಅಡಗಿರುತ್ತದೆ ಎಂದರು.

ಮಾಜಿ ಶಾಸಕ ಎಚ್.ಎಂ.



ವಿಶ್ವನಾಥ್ ಮಾತನಾಡಿ, ಗುಡ್ಡಗಾಡು ಪ್ರದೇಶದಲ್ಲಿ ಕೆಲಸ ಮಾಡುವ ಶಿಕ್ಷಕರಿಗೆ ಸರ್ಕಾರ ವಿಶೇಷ ಭತ್ಯೆ ಘೋಷಿಸಬೇಕು. ಕನಿಷ್ಟ ಗ್ರಾಮ ಪಂಚಾಯಿತಿಗಳಲ್ಲಿ ಶಿಕ್ಷಕರಿಗೆ ಮನೆಗಳನ್ನು ನಿರ್ಮಾಣ ಮಾಡಬೇಕು. ಪ್ರತಿಯೊಂದು ಶಾಲೆಗೆ ಒಂದು ಲ್ಯಾಪ್‌ಟಾಪ್ ಮತ್ತು ಸಂಬಂಧಿಸಿದ ಉಪಕರಣಗಳನ್ನು ನೀಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಕ್ಷೇತ್ರ ಗ್ಯಾರಂಟಿ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಶಿಕ್ಷಕರನ್ನು ಪ್ರೋತ್ಸಾಹಿಸಲು ವಿಶೇಷ ಜಾಗ್ರತೆ ವಹಿಸಲು ಸರ್ಕಾರದೊಡನೆ ಚರ್ಚಿಸಲಾಗುವುದು ಎಂದರು.

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆ ಡಾ. ಗುರುಬಸವರಾಜ ಯಲಗಚ್ಚಿನ ಮಾತನಾಡಿದರು.

ಮಾಜಿ ಶಾಸಕ ಎಚ್.ಕೆ. ಕುಮಾರಸ್ವಾಮಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಜೆ. ಕೃಷ್ಣೇಗೌಡ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸುಬ್ರಹ್ಮಣ್ಯ, ಕ್ಷೇತ್ರ ಸಮನ್ವಯಾಧಿಕಾರಿ ಆರ್. ವಿಜಯಕುಮಾರ್, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ರವಿ ನಾಕಲಗೂಡು, ಕೆ.ಎಸ್. ಮಂಜೇಗೌಡ, ಶಿವಮೂರ್ತಿ, ಗೋಪಾಲಕೃಷ್ಣ, ಶಾಂತಕೃಷ್ಣ, ಆದಿಲ್‌ಪಾಷ, ಉಮಾ ರವಿಪ್ರಕಾಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವರದರಾಜು, ಸರ್ಕಾರಿ, ಖಾಸಗಿ, ಅನುದಾನಿತ, ಅನುದಾನರಹಿತ ವಿವಿಧ ಶಿಕ್ಷಣ ಸಂಘದ ಪದಾಧಿಕಾರಿಗಳು ಹಾಜರಿದ್ದರು.

ನಿವೃತ್ತ, ವಿವಿಧ ಸ್ಪರ್ಧೆಗಳಲ್ಲಿ ಜಯಗಳಿಸಿದ, ತಾಲ್ಲೂಕು, ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದ ಶಾಲೆಗಳು ಮತ್ತು ಶಿಕ್ಷಕರನ್ನು ಅಭಿನಂದಿಸಲಾಯಿತು. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ರವರ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಯಿತು.

# ಮಳೆಗಾಗಿ ಚನ್ನಕೇಶವ ಸ್ವಾಮಿಗೆ ಕಲ್ಯಾಣೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ಕೃಷಿ ಚಟುವಟಿಕೆಗಳು ಚುರುಕುಗೊಳ್ಳಬೇಕು, ಕೆರೆ ಕಟ್ಟೆಗಳು ಹಾಗೂ ಜಲಾಶಯಗಳು ತುಂಬಿ ರೈತರ ಬದುಕಿನಲ್ಲಿ ಸಮೃದ್ಧಿ ನೆಲೆಸಬೇಕು ಎಂಬ ಸಂಕಲ್ಪದೊಂದಿಗೆ ಶಾಸಕ ಹೆಚ್.ಕೆ.ಸುರೇಶ್ ತಮ್ಮ ಜನ್ಮ ದಿನದ ಅಂಗವಾಗಿ ಶುಕ್ರವಾರ ವಿಶ್ವವಿಖ್ಯಾತ ಚನ್ನಕೇಶವಸ್ವಾಮಿ ದೇವಾಲಯದಲ್ಲಿ ಕಲ್ಯಾಣೋತ್ಸವ ನೆರವೇರಿಸಿದರು.

ಕುಟುಂಬದ ಸದಸ್ಯರೊಂದಿಗೆ ಕಲ್ಯಾಣೋತ್ಸವದಲ್ಲಿ ಪಾಲ್ಗೊಂಡ ಶಾಸಕ ಹೆಚ್. ಕೆ.ಸುರೇಶ್ ಅವರು, ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ರೈತರು ಸಮೃದ್ಧಿಯಾಗಲಿ, ಎಲ್ಲೆಡೆ ಸುಭಿಕ್ಷೆ ನೆಲೆಸಲಿ ಎಂದು ಚನ್ನಕೇಶವಸ್ವಾಮಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಕಲ್ಯಾಣೋತ್ಸವದ ಅಂಗವಾಗಿ ಬೆಳಗ್ಗೆಯಿಂದಲೇ ಚನ್ನಕೇಶವಸ್ವಾಮಿ, ಸೌಮ್ಯನಾಯಕಿ ಹಾಗೂ ರಂಗನಾಯಕಿ ಅಮ್ಮನವರಿಗೆ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಶೇಷ ಅಭಿಷೇಕ ಹಾಗೂ ಪೂಜೆ ನೆರವೇರಿಸಲಾಯಿತು. ದೇವಾಲಯದ ಪ್ರಧಾನ ಅರ್ಚಕರಾದ ಶ್ರೀನಿವಾಸ ಸ್ವಾಮಿ ಭಟ್ಟ ಹಾಗೂ ನರಸಿಂಹಪ್ರಿಯ ಭಟ್ಟ ಅವರು ವೈದಿಕ ಸಂಪ್ರದಾಯದಂತೆ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು.

ಅಭಿಷೇಕದ ಬಳಿಕ ಚನ್ನಕೇಶವಸ್ವಾಮಿಗೆ ವಿವಿಧ ಬಗೆಯ ಸುಗಂಧಭರಿತ ಹೂವುಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಇದರಿಂದ ದೇವಾಲಯದ ಆವರಣದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣಗೊಂಡಿತ್ತು.

ಕಲ್ಯಾಣೋತ್ಸವದ ಅಂಗವಾಗಿ ಉತ್ಸವ ಮೂರ್ತಿಗಳಾದ ಚನ್ನಕೇಶವಸ್ವಾಮಿ, ಸೌಮ್ಯನಾಯಕಿ ಹಾಗೂ ರಂಗನಾಯಕಿ ಅಮ್ಮನವರನ್ನು ವಿಶೇಷವಾಗಿ ಅಲಂಕರಿಸಿ, ದೇವಾಲಯದ ನಾಲ್ಕು ಮೂಲೆಗಳು ಹಾಗೂ ವೈಕುಂಠ ಬೀದಿಯ ನಾಲ್ಕು ಮೂಲೆಗಳ ಸುತ್ತಲೂ ಪ್ರದಕ್ಷಿಣೆ ನಡೆಸಲಾಯಿತು. ಎಂಟು ದಿಕ್ಕುಗಳಲ್ಲಿ ನಡೆದ ಪ್ರದಕ್ಷಿಣೆಯಲ್ಲಿ ಶಾಸಕ ಹೆಚ್. ಕೆ. ಸುರೇಶ್ ಅವರ ಕುಟುಂಬದ ಸದಸ್ಯರು, ಅಭಿಮಾನಿಗಳು ಹಾಗೂ ಭಕ್ತರು ಪಾಲ್ಗೊಂಡರು.

ಮಳೆ ಕೊರತೆಯಿಂದ ರೈತರಲ್ಲಿ ಆತಂಕ:

ಈ ವೇಳೆ ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ತಾಲ್ಲೂಕಿನ ಆರ್ಥಿಕತೆ ಬಹುಪಾಲು ಕೃಷಿಯನ್ನೇ ಅವಲಂಬಿಸಿರುವುದರಿಂದ ಮಳೆಯ ಕೊರತೆ ರೈತರು ಹಾಗೂ ಗ್ರಾಮೀಣ ಜನರಲ್ಲಿ ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ಮಳೆಗಾಗಿ ದೇವರ ಮೊರೆ ಹೋಗಿ ಕಲ್ಯಾಣೋತ್ಸವ ನೆರವೇರಿಸಲಾಗಿದೆ. ತಾಲ್ಲೂಕಿನಲ್ಲಿ ಉತ್ತಮ ಮಳೆಯಾಗಿ ಕೆರೆಕಟ್ಟೆಗಳು ಹಾಗೂ ಜಲಾಶಯಗಳು ತುಂಬಿ, ಕೃಷಿ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಬೇಕು. ರೈತರ ಬದುಕಿನಲ್ಲಿ ಸಮೃದ್ಧಿ ನೆಲೆಸುವುದರ ಜತೆಗೆ ಜನಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದು ಎಂಬ ಆಶಯದೊಂದಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

# ಬೆಂಗಳೂರಿಗೆ 4500 ಹೊಸ ಇವಿ ಬಸ್ ಸೇರ್ಪಡೆಗೆ ಕ್ಯಾಬಿನೆಟ್ ಅಸ್ತು!

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಸಾರಿಗೆ ಇಲಾಖೆ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಬಿಎಂಟಿಸಿಗೆ 4500 ಎಲೆಕ್ಟ್ರಿಕ್ ಬಸ್‌ಗಳು ಲಭ್ಯವಾಗಲಿವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಪಿಎಂ ಇ-ಡ್ರೈವ್ ಕಾರ್ಯಕ್ರಮದಡಿ ಈ 4500 ಬಸ್‌ಗಳನ್ನು ಪಡೆಯಲಾಗುತ್ತಿದೆ. ಇದಕ್ಕಾಗಿ ರಾಜ್ಯ ಸರ್ಕಾರ ವಾರ್ಷಿಕ 600 ಕೋಟಿ ರೂಪಾಯಿ ವೆಚ್ಚ ಮಾಡಲಿದೆ. 20 ವರ್ಷಕ್ಕೆ ಸುಮಾರು 12,000 ಕೋಟಿ ರೂಪಾಯಿಗಳನ್ನು ರಾಜ್ಯ ಸರ್ಕಾರ ಈ ಯೋಜನೆಗೆ ಖರ್ಚು ಮಾಡಲಿದೆ ಎಂದು ಅವರು ಹೇಳಿದ್ದಾರೆ.

''12 ಮೀಟರ್ ಉದ್ದದ 3800 ಎಲೆಕ್ಟ್ರಿಕ್ ಬಸ್‌ಗಳು ಮತ್ತು 9 ಮೀಟರ್ ಉದ್ದದ 900 ಎಲೆಕ್ಟ್ರಿಕ್



ಬಸ್‌ಗಳನ್ನು ನಿಗಮಕ್ಕೆ ಸೇರ್ಪಡೆ ಮಾಡಲಾಗುತ್ತಿದ್ದು, ಈ ಪೈಕಿ 400 ಬಸ್‌ಗಳು ಹವಾನಿಯಂತ್ರಿತವಾಗಿರಲಿವೆ. ವಾಹನ ತಯಾರಿಕಾ ಸಂಸ್ಥೆಗಳು ಹಂತ-ಹಂತವಾಗಿ ಇವಿ ಬಸ್‌ಗಳನ್ನು ತಯಾರಿಸಿ ಬಿಎಂಟಿಸಿಗೆ ಪೂರೈಕೆ ಮಾಡಲಿದ್ದು, ಹಂತ-ಹಂತವಾಗಿ ಈ ಬಸ್‌ಗಳನ್ನು ಬೆಂಗಳೂರು ನಾಗರಿಕರ ಸೇವೆಗೆ ಲಭ್ಯವಾಗುವಂತೆ ಮಾಡಲಾಗುತ್ತದೆ. ಈ ಇವಿ ಬಸ್‌ಗಳ ಸಂಚಾರದಿಂದ ಬೆಂಗಳೂರು ನಗರದ ಪರಿಸರ ಮಾಲಿನ್ಯ ಪ್ರಮಾಣ ಕಡಿಮೆಯಾಗಲಿದ್ದು, ಈ ಮೂಲಕ ರಾಜ್ಯ ಸರ್ಕಾರ ಪರಿಸರ ಸಂರಕ್ಷಣೆಯ ಬದ್ಧತೆ ಪ್ರದರ್ಶಿಸಲಿದೆ,'' ಎಂದು ಸಚಿವರು ಹೇಳಿದ್ದಾರೆ.

''ಕೇಂದ್ರ ಸರ್ಕಾರ ವಿವಿಧ ಬಸ್ ತಯಾರಿಕಾ ಸಂಸ್ಥೆಗಳ ಮೂಲಕ ಈ ಎಲೆಕ್ಟ್ರಿಕ್ ಬಸ್‌ಗಳನ್ನು ಪೂರೈಕೆ ಮಾಡಲಿದೆ. ಒಂದು ಕಿಲೋಮೀಟರ್‌ಗೆ ಇಂತಿಷ್ಟು ನಿಗದಿತ ಹಣವನ್ನು ಬಿಎಂಟಿಸಿ ಸಂಸ್ಥೆಗಳಿಗೆ ಪಾವತಿಸಲಿದೆ. ಇದರೊಂದಿಗೆ ರಾಜ್ಯದಲ್ಲಿ ಹೊಸ ಬಸ್ ಡಿಪೋ ನಿರ್ಮಾಣ ಮತ್ತು ಹಳೇ ಬಸ್ ನಿಲ್ದಾಣಗಳ ಉನ್ನತೀಕರಣಕ್ಕೆ ಸರ್ಕಾರ ಚಿಂತನೆ ನಡೆಸಿದ್ದು, ಇದಕ್ಕಾಗಿ ಕೇಂದ್ರ ಸರ್ಕಾರದಿಂದ 2 ಸಾವಿರ ಕೋಟಿ ರೂ. ಸಾಲ ಪಡೆಯಲು ನಿರ್ಧರಿಸಲಾಗಿದೆ,'' ಎಂದರು.

''ಮಹಿಳೆಯರಿಗೆ ಉಚಿತ ಪ್ರಯಾಣ ಕಲ್ಪಿಸುವ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಶಕ್ತಿ' ಯೋಜನೆಯಡಿ ರಾಜ್ಯದ ಒಂದು ಕೋಟಿಗೂ ಅಧಿಕ ಮಹಿಳೆಯರಿಗೆ ಮೊದಲ ಹಂತದಲ್ಲಿ ಉಚಿತ ಸ್ಮಾರ್ಟ್‌ಕಾರ್ಡ್ ಗಳನ್ನು ವಿತರಿಸಲಾಗುತ್ತದೆ. ಇದಕ್ಕಾಗಿ 250 ಕೋಟಿ ರೂ. ವೆಚ್ಚವಾಗಲಿದ್ದು, ಸದ್ಯದಲ್ಲೇ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗುತ್ತದೆ,'' ಎಂದು ಸಚಿವರು ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-06

1522: ಫರ್ಡಿನಾಂಡ್ ಮ್ಯಾಗೆಲನ್ ನೇತೃತ್ವದಲ್ಲಿ ಆರಂಭವಾಗಿದ್ದ ಯಾತ್ರೆಯನ್ನು ಅವರ ಸಾವಿನ ಬಳಿಕ ಸಿಬ್ಬಂದಿ ಪೂರ್ಣಗೊಳಿಸಿತು. ವಿಶ್ವವನ್ನು ಮೊದಲ ಬಾರಿಗೆ ಸುತ್ತಿ ಬಂದ ಸಮುದ್ರಯಾನ ಪೂರ್ಣಗೊಂಡಿತು.

1901: ಅಮೆರಿಕದ ಅಧ್ಯಕ್ಷ ವಿಲಿಯಂ ಮೆಕಿನ್ಲಿ ಅವರನ್ನು ನ್ಯೂಯಾರ್ಕ್‌ನಲ್ಲಿ ಗುಂಡಿಕ್ಕಲಾಯಿತು.

1965: ಭಾರತ-ಪಾಕಿಸ್ತಾನ ಯುದ್ಧದ ಸಂದರ್ಭದಲ್ಲಿ ಭಾರತೀಯ ಸೇನೆ ಪಶ್ಚಿಮ ರಂಗದಲ್ಲಿ ಪಾಕಿಸ್ತಾನದ ಗಡಿಯನ್ನು ದಾಟಿ ಪ್ರಮುಖ ಸೇನಾ ಕಾರ್ಯಾಚರಣೆ ಆರಂಭಿಸಿತು.

1991: ಸೋವಿಯತ್ ಒಕ್ಕೂಟದಿಂದ ಲಿಥುವೇನಿಯಾ ಸ್ವಾತಂತ್ರ್ಯ ಪಡೆದ ರಾಷ್ಟ್ರವಾಗಿ ವ್ಯಾಪಕ ಅಂತರರಾಷ್ಟ್ರೀಯ ಮಾನ್ಯತೆ ಪಡೆಯುವ ಪ್ರಕ್ರಿಯೆ ವೇಗಗೊಂಡಿತು.

2018: ಭಾರತದ ಸುಪ್ರೀಂ ಕೋರ್ಟ್ ಐತಿಹಾಸಿಕ ತೀರ್ಪು ನೀಡಿ, ಸಮ್ಮತಿಯುತ ಸಲಿಂಗ ಸಂಬಂಧವನ್ನು ಅಪರಾಧವೆಂದು ಪರಿಗಣಿಸಿದ್ದ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 377ರ ಅನ್ವಯವನ್ನು ರದ್ದುಪಡಿಸಿತು.

### ಜನನ

1885: ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ತಂದೆ ರಾಮ್‌ಜಿ ಮಾಲೋಜಿ ಸಕ್ಪಾಲ್

1972: ಅಮೆರಿಕದ ಖ್ಯಾತ ನಟ ಇಡ್ರಿಸ್ ಎಲ್ಬಾ

# ಬೆಂಗಳೂರಿಗೆ ಮಹಾ ರಿಂಗ್‌ರೋಡ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಟ್ರಾಫಿಕ್ ದಟ್ಟಣೆಯನ್ನು ಸಂಪೂರ್ಣವಾಗಿ ತಗ್ಗಿಸಲು ಮತ್ತು ಉಪನಗರಗಳ ನಡುವೆ ಸುಗಮ ಸಂಚಾರ ಕಲ್ಪಿಸಲು ಮಹತ್ವದ ಹೆಜ್ಜೆ ಇಡಲಾಗಿದೆ. ಮಹಾನಗರದ ದಕ್ಷಿಣ ಭಾಗದಲ್ಲಿ ಬೃಹತ್ ಪ್ರತ್ಯೇಕ ವರ್ತುಲ ರಸ್ತೆಯಾದ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿಆರ್‌ಆರ್-2 / ಬಿಬಿಸಿ) ನಿರ್ಮಾಣಕ್ಕೆ ಅಗತ್ಯವಿರುವ 1427.34 ಎಕರೆ ಜಮೀನು ಸ್ವಾಧೀನಕ್ಕೆ ರಾಜ್ಯ ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿದೆ. ಇದರೊಂದಿಗೆ ಪಿಆರ್‌ಆರ್-1 ಮತ್ತು ಪಿಆರ್‌ಆರ್-2 ಯೋಜನೆಗಳು ಒಟ್ಟಾಗಿ ಬೆಂಗಳೂರಿನ ಸುತ್ತಲೂ ಬೃಹತ್ ವರ್ತುಲಾಕಾರದ ರಸ್ತೆ ಜಾಲವನ್ನು ಸೃಷ್ಟಿಸಲಿವೆ.

ಪಿಆರ್‌ಆರ್-1 ಮತ್ತು ಪಿಆರ್‌ಆರ್-2 ಯೋಜನೆಗಳಿಂದ ನಗರದ ಸುತ್ತಲೂ ಒಟ್ಟು 125



ಕಿ.ಮೀ. ಉದ್ದದ ಬೃಹತ್ ರಸ್ತೆ ಜಾಲ ನಿರ್ಮಾಣಗೊಳ್ಳಲಿದೆ. ಈಗಾಗಲೇ ಮಾಗಡಿ ರಸ್ತೆಯಿಂದ ಮೈಸೂರು ರಸ್ತೆವರೆಗೆ 10 ಕಿ.ಮೀ. ಉದ್ದದ ರಸ್ತೆ ( ಎಸ್.ಎಂ.ಕೃಷ್ಣ ರಸ್ತೆ ) ವಾಹನ ಸಂಚಾರಕ್ಕೆ ಮುಕ್ತವಾಗಿದೆ.

ಹೊಸೂರು ರಸ್ತೆಯಿಂದ ಆರಂಭವಾಗುವ ಈ ಪಿಆರ್‌ಆರ್-2 ರಸ್ತೆಯು ಆನೇಕಲ್‌ನ ಅತ್ತಿಬೆಲೆ, ಜಿಗಣಿ ಮತ್ತು ಬೊಮ್ಮಸಂದ್ರ ಕೈಗಾರಿಕಾ ಪ್ರದೇಶಗಳಿಗೆ ನೇರ ಸಂಪರ್ಕ ಕಲ್ಪಿಸಲಿದ್ದು, ನೈಸ್ ರಸ್ತೆಗೆ ಅತ್ಯುತ್ತಮ ಪರ್ಯಾಯವಾಗಲಿದೆ. ಜತೆಗೆ ಬನ್ನೇರುಘಟ್ಟ ಮತ್ತು ಕನಕಪುರ ರಸ್ತೆಗಳಲ್ಲಿ ಟ್ರಕ್ ಟರ್ಮಿನಲ್‌ಗಳು ಹಾಗೂ ಪ್ರಮುಖ ಜಂಕ್ಷನ್‌ಗಳಲ್ಲಿ ಕ್ಲೋವರ್ ಲೀಫ್‌ಗಳನ್ನು ನಿರ್ಮಿಸಲಾಗುತ್ತದೆ. ಒಟ್ಟು 100 ಮೀಟರ್ ಪೈಕಿ 65 ಮೀಟರ್ ಅಗಲದಲ್ಲಿ ರಸ್ತೆ ನಿರ್ಮಿಸಲಾಗುತ್ತಿದ್ದು, 8 ಪಥಗಳ ರಸ್ತೆ, ಸರ್ವೀಸ್ ರಸ್ತೆ, ಸೈಕಲ್ ಪಥ, ಪಾದಚಾರಿ ಮಾರ್ಗ ಹಾಗೂ ಭವಿಷ್ಯದ ಮೆಟ್ರೋ ಸಂಚಾರಕ್ಕೆ ಪ್ರತ್ಯೇಕ ಮಾರ್ಗ ಕಾಯ್ದಿರಿಸಲಾಗಿದೆ. ಉಳಿದ 35 ಮೀಟರ್ ಜಾಗವನ್ನು ವಾಣಿಜ್ಯ ಉದ್ದೇಶಕ್ಕೆ ಮೀಸಲಿಡಲಾಗಿದೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು (ಬಿಡಿಎ) ಉತ್ತರ ಭಾಗದಲ್ಲಿ 73 ಕಿ.ಮೀ. ಉದ್ದದ ಪೆರಿಫೆರಲ್ ವರ್ತುಲ ರಸ್ತೆ-1 (ಪಿಆರ್‌ಆರ್-1) ನಿರ್ಮಾಣ ಕಾರ್ಯವನ್ನು ಮೂರು ಪ್ಯಾಕೇಜ್‌ಗಳಾಗಿ ವಿಂಗಡಿಸಿ ಚುರುಕುಗೊಳಿಸಿದೆ. ಮೊದಲ ಪ್ಯಾಕೇಜ್ ಅಡಿಯಲ್ಲಿ ಮಾದಾವರದಿಂದ ಬಳ್ಳಾರಿ ರಸ್ತೆವರೆಗೆ 21 ಕಿ.ಮೀ. ರಸ್ತೆ ನಿರ್ಮಾಣಕ್ಕೆ ಶಂಕರ ನಾರಾಯಣ ಕನ್‌ಸ್ಟ್ರಕ್ಷನ್ಸ್ (ಎಸ್‌ಎನ್‌ಸಿ) ಸಂಸ್ಥೆಗೆ ಗುತ್ತಿಗೆ ನೀಡಲಾಗಿದ್ದು, ಈ ಮಾರ್ಗವು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೂ ಸಂಪರ್ಕ ಕಲ್ಪಿಸಲಿದೆ. ಪ್ರಸ್ತುತ ದಕ್ಷಿಣ ಭಾಗದಲ್ಲಿ ಪಿಆರ್‌ಆರ್-2 ಅಂತಿಮ ಅಧಿಸೂಚನೆ ಹೊರಬಿದ್ದಿರುವುದರಿಂದ ಬೆಂಗಳೂರು ಸುತ್ತಲೂ ರಿಂಗ್ ರೋಡ್ ನಿರ್ಮಾಣ ಕಾರ್ಯ ವೇಗ ಪಡೆದುಕೊಂಡಿದೆ.

# ಕೊಳಲು ಗೋಪಾಲಕೃಷ್ಣ ಸ್ವಾಮಿ ವಿಶೇಷ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಕೊಣನೂರು: ಶ್ರೀ ಕೊಳಲು ಗೋಪಾಲಕೃಷ್ಣ ಸ್ವಾಮಿ ದೇವಾಲಯದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಜನ್ಮಾಷ್ಟಮಿ ಅಂಗವಾಗಿ ದೇವಾಲಯವನ್ನು ತಳಿರು-ತೋರಣ ಹಾಗೂ ವಿವಿಧ ಬಗೆಯ ಹೂವುಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಮೂಲವಿಗ್ರಹಕ್ಕೆ ಪಂಚವರ್ಣದ ವಿಶೇಷ ಅಲಂಕಾರ ಮಾಡಲಾಗಿತ್ತು. ಬೆಳಿಗ್ಗೆ ವಿಶ್ವಕ್ಸೇನಾರಾಧನೆ, ಪುಣ್ಯಾಹವಾಚನ, ಕಂಕಣಧಾರಣೆ, ಪಂಚಾಮೃತ ಅಭಿಷೇಕ, ಅಂಬೆಗಾಲು ಕೃಷ್ಣನಿಗೆ ತೊಟ್ಟಿಲು ಸೇವೆ, ಅಷ್ಟಾವಧಾನ ಸೇವೆ, ಅಷ್ಟೋತ್ತರ ಸೇವೆ, ಮಹಾನೈವೇದ್ಯ ಹಾಗೂ ಮಹಾಮಂಗಳಾರತಿ ಸೇರಿ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಹೂವುಗಳಿಂದ ವಿಶೇಷವಾಗಿ ಅಲಂಕರಿಸಲಾಗಿದ್ದ ಉತ್ಸವಮೂರ್ತಿಗೂ ವಿಶೇಷ ಪೂಜೆ ಸಲ್ಲಿಸಲಾಯಿತು. ಅರ್ಚಕರಾದ ಶ್ರೀಧರ್, ನಾರಾಯಣ್ ಹಾಗೂ ಲಿಖಿತ್ ವೈಷ್ಣವ್ ಅವರು ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು. ಮಹಾಮಂಗಳಾರತಿ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಬೆಳಿಗ್ಗೆಯಿಂದ ರಾತ್ರಿವರೆಗೆ ದೇವಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ ಭಕ್ತರು ಸರತಿ ಸಾಲಿನಲ್ಲಿ ನಿಂತು ಶ್ರೀ ಕೊಳಲು ಗೋಪಾಲಕೃಷ್ಣ ಸ್ವಾಮಿಯ ದರ್ಶನ ಪಡೆದು ಪುನೀತರಾದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248